ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂಸ್ಥೆ (ಕೇಂದ್ರ)

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ ದಿನಾಂಕ : DATE : 13/06/2019

# ಆಧಾರ್ ತಿದ್ದುಪಡಿ ಮಸೂದೆಗೆ ಅಸ್ತು

ವಿ.ವಾ. 13-6-19

ನವದೆಹಲಿ: ಆಧಾರ್ ತಿದ್ದುಪಡಿ ಮಸೂದೆಗೆ ಕೇಂದ್ರ ಸಚಿವ ಸಂಪುಟ ಬುಧವಾರ ಸಮ್ಮತಿ ಸೂಚಿಸಿದೆ. ಮುಂದಿನ ಅಧಿವೇಶನದಲ್ಲಿ ಇದನ್ನು ಮಂಡನೆ ಮಾಡಲು ನಿರ್ಧರಿಸಲಾಗಿದೆ. ಇದು ಸಂಸತ್‌ನಲ್ಲಿ ಅನುಮೋದನೆ ಪಡೆದುಕೊಂಡರೆ ಬ್ಯಾಂಕ್ ಖಾತೆ ತೆರೆಯಲು ಮತ್ತು ಮೊಬೈಲ್ ಫೋನ್ ಸಂಪರ್ಕ ಪಡೆದುಕೊಳ್ಳಲು ಆಧಾರ್ ಗುರುತಿನ ಚೀಟಿ ಸಲ್ಲಿಸಬೇಕಾಗುತ್ತದೆ. 2016ರ ಆಧಾರ್ ಕಾಯ್ದೆ ತಿದ್ದುಪಡಿ ಮತ್ತು 2019ರ ಮಾರ್ಚ್‌ನಲ್ಲಿ ಹೊರಡಿಸಲಾಗಿದ್ದ ಸುಗ್ರೀವಾಜ್ಞೆ ಬದಲಾಗಿ ಈ ಮಸೂದೆ ಮಂಡಿಸಲಾಗುತ್ತಿದೆ.

ಮಾನದಂಡಗಳನ್ನು ಉಲ್ಲಂಘಿಸುವವರಿಗೆ ಮತ್ತು ಖಾಸಗಿತನಕ್ಕೆ ಧಕ್ಕೆ ಮಾಡುವವರಿಗೆ ಕಠಿಣ ಶಿಕ್ಷೆ ವಿಧಿಸುವುದಕ್ಕೂ ಮಸೂದೆಯಲ್ಲಿ ಅವಕಾಶ ನೀಡಲಾಗಿರುತ್ತದೆ. ನಿಬಂಧನೆಗಳನ್ನು ಉಲ್ಲಂಘಿಸುವವರಿಗೆ 1 ಕೋಟಿ ರೂ. ದಂಡ ವಿಧಿಸುವುದಕ್ಕೆ ಅವಕಾಶವಿದೆ. ಉಲ್ಲಂಘನೆ ಮುಂದುವರಿಸಿದಲ್ಲಿ ದಿನಕ್ಕೆ 10 ಲಕ್ಷ ರೂ.ನಂತೆ ಹೆಚ್ಚುವರಿ ದಂಡ ವಿಧಿಸಬಹುದಾಗಿದೆ. ಸೆಂಟ್ರಲ್ ಐಡೆಂಟಿಟಿ ಡೇಟಾ ಸಂಗ್ರಹಕ್ಕೆ ಅನಧಿಕೃತ ಪ್ರವೇಶ ಮತ್ತು ಡೇಟಾ ಟ್ಯಾಂಪರಿಂಗ್‌ಗೆ ಜೈಲುಶಿಕ್ಷೆಯನ್ನು ಈಗಿರುವ 3 ವರ್ಷದಿಂದ 10 ವರ್ಷಕ್ಕೆ ವಿಸ್ತರಿಸಲಾಗಿದೆ.

AADHAAR

## ಕಾಶ್ಮೀರ ರಾಷ್ಟ್ರಪತಿ ಆಡಳಿತ ವಿಸ್ತರಣೆ

ಜಮ್ಮು- ಕಾಶ್ಮೀರದಲ್ಲಿ ರಾಷ್ಟ್ರಪತಿ ಆಡಳಿತವನ್ನು ಆರು ತಿಂಗಳ ಅವಧಿಗೆ ಮುಂದುವರಿಸಲು ನಿರ್ಧರಿಸಲಾಗಿದೆ. 2019ರ ಜುಲೈ 3ರಿಂದ ಇದು ಅನ್ವಯವಾಗಲಿದೆ.

**ಮೀಸಲಾತಿ ಮಸೂದೆಗೆ ಒಪ್ಪಿಗೆ:** ಜಮ್ಮು - ಕಾಶ್ಮೀರ ಮೀಸಲಾತಿ(ತಿದ್ದುಪಡಿ) ಮಸೂದೆ-2019ಕ್ಕೂ ಸಂಪುಟ ಸಮ್ಮತಿ ಒಪ್ಪಿಗೆ ಸೂಚಿಸಿದೆ. ಕಾಶ್ಮೀರದ ಗಡಿ ಭಾಗದಲ್ಲಿ ವಾಸವಾಗಿರುವ ಜನರಿಗೆ ನೇರ ನೇಮಕಾತಿ, ಪದೋನ್ನತಿ ಮತ್ತು ಹಲವು ವೃತ್ತಿಪರ ಕೋರ್ಸ್‌ಗಳಿಗೆ ದಾಖಲಾತಿ ಮುಂತಾದ ಸೌಲಭ್ಯಗಳು ಸಿಗಲಿವೆ. ಕೇಂದ್ರೀಯ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ 7000 ಸ್ಥಾನಗಳಿಗೆ ಶಿಕ್ಷಕರ ನೇಮಕಾತಿಗೆ ಸಂಪುಟ ಒಪ್ಪಿಗೆ ಸೂಚಿಸಿದೆ.